ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 28-10-20

## ಪರಿಷತ್ 4 ಸ್ಥಾನಗಳಿಗೆ ಇಂದು ಮತದಾನ

ಬೆಂಗಳೂರು: ವಿಧಾನಪರಿಷತ್ತಿನ 2 ಪದವೀಧರ ಮತ್ತು 2 ಶಿಕ್ಷಕರ ಕ್ಷೇತ್ರಗಳಿಗೆ ಬುಧವಾರ (ಅ.28) ಮತದಾನ ನಡೆಯಲಿದ್ದು, ನವೆಂಬರ್ 2ರಂದು ಮತ ಎಣಿಕೆ ನಡೆಯಲಿದೆ.

ಬೆಳಿಗ್ಗೆ 8 ರಿಂದ ಸಂಜೆ 5 ರ ವರೆಗೆ ಮತದಾನ ನಡೆಯಲಿದೆ. ನಾಲ್ಕು ಕ್ಷೇತ್ರಗಳಲ್ಲಿ ಒಟ್ಟು 2,34,718 ಮಂದಿ ಮತದಾರರಿದ್ದಾರೆ. ಮತದಾನಕ್ಕಾಗಿ 549 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

ಮತದಾರರು ಚುನಾವಣಾ ಗುರುತಿನ ಚೀಟಿ ಅಥವಾ ಆಧಾರ್, ಚಾಲನಾ ಪರವಾನಗಿ, ಪಾಸ್‌ಪೋರ್ಟ್, ಕೇಂದ್ರ ಮತ್ತು ರಾಜ್ಯ ಸರ್ಕಾರಿ ನೌಕರರಾಗಿದ್ದರೆ ಅವರ ಕಚೇರಿ ಗುರುತಿನ ಚೀಟಿಯನ್ನು ತೋರಿಸಿ ಮತದಾನ ಮಾಡಬಹುದು ಎಂದು ಚುನಾವಣಾ ಆಯೋಗ ತಿಳಿಸಿದೆ.